**ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಲಯ, ರೋಣ**

ಸಿ.ಸಿ. ನಂ. 658/2021

ಸಿ.ಡಬ್ಲೂಃ 3 ಪಿ.ಡಬ್ಲೂಃ 1

ಹೆಸರುಃ ಹನಮಂತ

ತಂದೆಯ ಹೆಸರುಃ ನಿಂಗಪ್ಪ ತಂಗಡಗಿ

ವಯಸ್ಸುಃ 35 ವರ್ಷ

ಉದ್ಯೋಗಃ ಚಾಲಕ

ವಿಳಾಸಃ ಗಜೇಂದ್ರಗಡ

**ಸಾಕ್ಷಿಯನ್ನು ಸತ್ಯ ಪ್ರತಿಜ್ಞೆಯ ಮೇರೆಗೆ ಇಂದು ದಿನಾಂಕಃ** 03-01-2024 **ರಂದು ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ –ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರವರಿಂದಃ**

**1.** ನಾನು ಈಗ ಒಂದು ದಾಖಲೆ ನೋಡುತ್ತಿದ್ದೇನೆ ಅದರಲ್ಲಿ ನನ್ನ ಸಹಿ ಇದೆ. ಸದರಿ ದಾಖಲೆ ಪಂಚನಾಮೆ ಆಗಿದ್ದು, ಅದನ್ನು ಈಗ ನಿಪಿಃ 1 ಎಂದು, ಸಾಕ್ಷಿಯ ಸಹಿಯನ್ನು ನಿಪಿಃ 1 ಎ ಎಂದು ಗುರುತಿಸಲಾಯಿತು. ನಿಪಿಃ 1 ಕ್ಕೆ ನಾನು ಸುಮಾರು 3-4 ವರ್ಷಗಳ ಹಿಂದೆ ಪೊಲೀಸರ ಕೋರಿಕೆಯ ಮೇರೆಗೆ ಸಹಿ ಮಾಡಿದ್ದೇನೆ. ನಿಪಿಃ 1 ರಲ್ಲಿ ಬರೆದ ವಿಚಾರ ಗೊತ್ತಿಲ್ಲ. ನನ್ನ ಜೊತೆ ಬೇರೆ ಯಾರು ನಿಪಿಃ 1 ಕ್ಕೆ ಸಹಿ ಮಾಡಿದ್ದರು ಎಂದು ನನಗೆ ಗೊತ್ತಿಲ್ಲ. ಚಾಸಾ 1 ರವರ ಪರಿಚಯ ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಮಾನ್ಯ ಸ ಸ ಅ ರವರು ಸಾಕ್ಷಿಯು ಅಭಿಯೋಜನೆಗೆ ವಿರುದ್ಧವಾಗಿ ಸಾಕ್ಷ್ಯ ನುಡಿದಿರುವುದರಿಂದ, ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಲು ಅನುಮತಿ ಕೋರಿರುತ್ತಾರೆ. ಸ.ಸ.ಅ. ರವರ ಕೋರಿಕೆಯ ಮೇರೆಗೆ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ- ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

1. ದಿಃ 08/05/2020 ರಂದು ಬೆಃ 9-30 ರಿಂದ 10-30 ರವರೆಗೆ ಚಾಸಾ-1 ರವರು ಘಟನೆಯ ಸ್ಥಳ ತೋರಿಸಿದ ಮೇರೆಗೆ ಪೊಲೀಸರು ಅಲ್ಲಿ ಬಂದು ಗಜೇಂದ್ರಗಡದ ಗಂಜಿಪೇಟೆಯಲ್ಲಿ ಇರುವ ಚಾಸಾ 1 ರವರ ಮನೆಯ ಮುಂದೆ ನನ್ನ ಮತ್ತು ಚಾಸಾ-2 ರಮೇಶ ಇವರ ಸಮಕ್ಷಮ ನಿಪಿಃ 1 ರಂತೆ ಪಂಚನಾಮೆ ಮಾಡಿದ್ದರು ಎಂದರೆ ಸರಿ ಅಲ್ಲ.

2. ಈ ಎಲ್ಲಾ ಸಂಗತಿಗಳು ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿ ಅಲ್ಲ.

**ಪಾಟೀ ಸವಾಲು ಆರೋಪಿ ಪರ ವಕೀಲರು ಏನು ಇಲ್ಲಾ ಎಂದು ಹೇಳುತ್ತಾರೆ.**

**ಮರುವಿಚಾರಣೆ ಇಲ್ಲಃ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಲಾಗಿದೆ.)

ಓ.ಹೇ.ಕೇ. ಸರಿ ಅದೆ.

**( ಆದಿತ್ಯ ಆರ್ ಕಲಾಲ್ )**
ಪ್ರಧಾನ ಸಿವಿಲ್ ಹಾಗೂ ಜೆ.ಎಮ್.ಎಫ್.ಸಿ
ನ್ಯಾಯಾಧೀಶರು ರೋಣ .